**Akashvani : Bangalore**
**National Bulletin In Kannada**
**24.07.2024 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.07.2024 / 13.10 hrs**

<><*<><>*><>

<u>ಮುಖ್ಯಾಂಶಗಳು</u>

೧. ಕೇಂದ್ರ ಬಜೆಟ್; ಪ್ರತಿಪಕ್ಷಗಳ ಆಡಳಿತವಿರುವ ರಾಜ್ಯಗಳಿಗೆ ಅನುದಾನದಲ್ಲಿ ತಾರತಮ್ಯ ಆರೋಪಿಸಿ ಐಎನ್‌ಡಿಐ ಮೈತ್ರಿಕೂಟದಿಂದ ಪ್ರತಿಭಟನೆ

೨. ರಾಷ್ಟ್ರೀಯ ಜಲಜೀವನ್ ಯೋಜನೆಯಡಿ ದೇಶಾದ್ಯಂತ ೧೫ ಕೋಟಿ ಗ್ರಾಮೀಣ ಕುಟುಂಬಗಳಿಗೆ ನಲ್ಲಿ ನೀರಿನ ಸಂಪರ್ಕ

೩. ಅಧಿಕೃತ ಭೇಟಿಗಾಗಿ ಭಾರತಕ್ಕೆ ಆಗಮಿಸಿದ ಬ್ರಿಟನ್ ವಿದೇಶಾಂಗ ಸಚಿವ ಡೇವಿಡ್ ಲ್ಯಾಮಿ

೪. ಏಷ್ಯಾ ಕಪ್ ಟಿ-೨೦ ಮಹಿಳಾ ಕ್ರಿಕೆಟ್; ಬಾಂಗ್ಲಾದೇಶ - ಮಲೇಷಿಯಾ ಮುಖಾಮುಖಿ

<><*<><>*><>

ಕೇಂದ್ರ ಬಜೆಟ್‌ನಲ್ಲಿ ಪ್ರತಿಪಕ್ಷಗಳ ಆಡಳಿತವಿರುವ ರಾಜ್ಯಗಳಿಗೆ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗಿದೆ ಎಂದು ಆರೋಪಿಸಿ, ಪ್ರತಿಪಕ್ಷ ಐಎನ್‌ಡಿಐ ಮೈತ್ರಿಕೂಟದ ನಾಯಕರು ಇಂದು ಸಂಸತ್ತಿನ ಹೊರಗೆ ಪ್ರತಿಭಟನೆ ನಡೆಸಿದರು.ಅನುದಾನದ ವಿಷಯದಲ್ಲಿ ಎಲ್ಲಾ ರಾಜ್ಯಗಳನ್ನು ಸಮಾನವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರು. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಬಜೆಟ್‌ನಲ್ಲಿ ಪ್ರತಿಪಕ್ಷಗಳ ಆಡಳಿತವಿರುವ ರಾಜ್ಯಗಳಿಗೆ ಅನ್ಯಾಯವಾಗಿದೆ ಎಂದು ಆರೋಪಿಸಿದ ಅವರು, ಇದರ ವಿರುದ್ಧ ಸಂಸತ್ತಿನ ಹೊರಗೆ ಮತ್ತು ಒಳಗೆ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು. ಈ ವಿಷಯ ಕುರಿತು ಪ್ರತಿಕ್ರಿಯಿಸಿದ ಬಿಜೆಪಿ ಹಿರಿಯ ನಾಯಕ ರವಿಶಂಕರ್ ಪ್ರಸಾದ್, ಸಮಾಜದ ಪ್ರತಿಯೊಬ್ಬರಿಗಾಗಿ ಬಜೆಟ್ ರೂಪಿಸಲಾಗುತ್ತದೆ. ಪ್ರತಿಪಕ್ಷಗಳು ಬಜೆಟ್ ಪ್ರತಿಯನ್ನು ಸರಿಯಾಗಿ ಓದಿ, ಅರ್ಥೈಸಿಕೊಳ್ಳಬೇಕಾಗಿದೆ ಎಂದು ಹೇಳಿದರು.

<><*<><>*><>

ಕೇಂದ್ರ ಬಜೆಟ್‌ನಲ್ಲಿ ಕೆಲವು ರಾಜ್ಯಗಳಿಗೆ ತಾರತಮ್ಯ ಮಾಡಲಾಗಿದೆ ಎಂಬ ಪ್ರತಿಪಕ್ಷಗಳ ಆರೋಪವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಳ್ಳಿಹಾಕಿದ್ದಾರೆ. ಇಂದು ರಾಜ್ಯಸಭೆಯಲ್ಲಿ ಶೂನ್ಯ ವೇಳೆಯಲ್ಲಿ ಪ್ರತಿಪಕ್ಷಗಳ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ವಿರೋಧ ಪಕ್ಷದ ಆಡಳಿತವಿರುವ ರಾಜ್ಯಗಳಿಗೆ ಏನನ್ನೂ ನೀಡಿಲ್ಲ ಎಂಬ ಭಾವನೆಯನ್ನು ಜನರಲ್ಲಿ ಮೂಡಿಸಲು ಕಾಂಗ್ರೆಸ್ ನೇತೃತ್ವದ ಪ್ರತಿಪಕ್ಷಗಳು ಉದ್ದೇಶಪೂರ್ವಕವಾಗಿ ಪ್ರಯತ್ನಿಸುತ್ತಿವೆ ಎಂದು ದೂರಿದರು. ಪ್ರತಿ ಬಜೆಟ್‌ನಲ್ಲಿ

ದೇಶದ ಪ್ರತಿಯೊಂದು ರಾಜ್ಯವನ್ನು ಹೆಸರಿಸಲು ಅವಕಾಶ ಸಿಗುವುದಿಲ್ಲ. ಬಜೆಟ್ ಭಾಷಣದಲ್ಲಿ ನಿರ್ದಿಷ್ಟ ರಾಜ್ಯವನ್ನು ಹೆಸರಿಸದಿದ್ದರೆ, ಕೇಂದ್ರ ಸರ್ಕಾರದ ಕಾರ್ಯಕ್ರಮಗಳು ಈ ರಾಜ್ಯಗಳಿಗೆ ತಲುಪುವುದಿಲ್ಲ ಎಂದು ಅರ್ಥವಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಮಹಾರಾಷ್ಟ್ರ ಮತ್ತು ಪಶ್ಚಿಮ ಬಂಗಾಳದಲ್ಲಿ ಅನೇಕ ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರ ಸಚಿವ ಸಂಪುಟವು ಅನುಮತಿ ನೀಡಿದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದರು. ಸಚಿವರ ಪ್ರತಿಕ್ರಿಯೆ ಬೆನ್ನಲ್ಲೇ ಪ್ರತಿಪಕ್ಷಗಳು ಸಭಾತ್ಯಾಗ ಮಾಡಿದವು. ಇದಕ್ಕೂ ಮುನ್ನ ಸದನದಲ್ಲಿ ರಾಜ್ಯಸಭೆಯ ವಿರೋಧ ನಾಯಕ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಕೇಂದ್ರ ಬಜೆಟ್, ಸರ್ಕಾರವನ್ನು ಉಳಿಸುವ ಪ್ರಯತ್ನವಾಗಿದೆ ಎಂದು ಆರೋಪಿಸಿದ ಅವರು, ಬಜೆಟ್‌ನಲ್ಲಿ ಸಮತೋಲನ ಇಲ್ಲದಿದ್ದರೆ ಅಭಿವೃದ್ಧಿ ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು

<><*<><>*><>

ರಾಷ್ಟ್ರೀಯ ಜಲಜೀವನ್ ಅಭಿಯಾನದಡಿ ದೇಶಾದ್ಯಂತ ೧೫ ಕೋಟಿ ಗ್ರಾಮೀಣ ಕುಟುಂಬಗಳಿಗೆ ನಲ್ಲಿ ನೀರಿನ ಸಂಪರ್ಕವನ್ನು ಒದಗಿಸುವ ಮೂಲಕ ಐತಿಹಾಸಿಕ ಮೈಲಿಗಲ್ಲು ಸಾಧಿಸಿದೆ. ೨೦೨೪ರ ವೇಳೆಗೆ ಪ್ರತಿ ಗ್ರಾಮೀಣ ಮನೆಗಳಿಗೆ ನಲ್ಲಿ ನೀರು ಸರಬರಾಜು ಮಾಡುವ ಗುರಿಯೊಂದಿಗೆ ೨೦೧೯ ರಲ್ಲಿ ಈ ಯೋಜನೆ ಘೋಷಿಸಲಾಯಿತು. ೨೦೧೯ರಲ್ಲಿ ೩ ಕೋಟಿ ಗ್ರಾಮೀಣ ಮನೆಗಳಿಗೆ ನಲ್ಲಿ ನೀರಿನ ಸಂಪರ್ಕವಿತ್ತು. ಕೇವಲ ಐದು ವರ್ಷಗಳ ಅವಧಿಯಲ್ಲಿ ಈ ಸಂಖ್ಯೆ ೧೫ ಕೋಟಿಗೆ ಏರಿಕೆಯಾಗಿದ್ದು, ವೇಗವಾಗಿ ಇಷ್ಟು ಗ್ರಾಮೀಣ ಮನೆಗಳಿಗೆ ನಲ್ಲಿ ನೀರಿನ ಸಂಪರ್ಕ ಒದಗಿಸಲಾಗಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್, ಈ ಅಭಿಯಾನವು ದೇಶವಾಸಿಗಳಿಗೆ ಶುದ್ಧ ನೀರು ಒದಗಿಸುವುದು ಮಾತ್ರವಲ್ಲದೆ, ಅವರ ಜೀವನದ ಗುಣಮಟ್ಟವನ್ನು ಸುಧಾರಿಸಿದೆ ಎಂದು ತಿಳಿಸಿದ್ದಾರೆ. ೮ ರಾಜ್ಯಗಳು ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ಶೇಕಡ ನೂರರಷ್ಟು ಗುರಿಯನ್ನು ಸಾಧಿಸಲಾಗಿದೆ. ಗೋವಾ, ತೆಲಂಗಾಣ, ಹರ್ಯಾಣ, ಗುಜರಾತ್, ಪಂಜಾಬ್, ಹಿಮಾಚಲ ಪ್ರದೇಶ, ದಾದ್ರಾ ಮತ್ತು ನಗರಹಾವೇಲಿ, ದಮನ್ ಮತ್ತು ದಿಯು ಹಾಗೂ ಅಂಡಮಾನ್- ನಿಕೋಬಾರ್ ದ್ವೀಪಗಳಲ್ಲಿ ಶೇಕಡ ನೂರರಷ್ಟು ಗ್ರಾಮೀಣ ಕುಂಟುಂಬಗಳಿಗೆ ನಲ್ಲಿನೀರಿನ ಸಂಪರ್ಕ ಒದಗಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

<><*<><>*><>

ಬ್ರಿಟನ್ ವಿದೇಶಾಂಗ ಸಚಿವ ಡೇವಿಡ್ ಲ್ಯಾಮಿ, ತಮ್ಮ ಅಧಿಕೃತ ಭೇಟಿಗಾಗಿ ಇಂದು ಭಾರತಕ್ಕೆ ಆಗಮಿಸಿದ್ದಾರೆ. ಬ್ರಿಟನ್ ವಿದೇಶಾಂಗ ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ಇದು ಡೇವಿಡ್ ಲ್ಯಾಮಿ ಅವರ ಮೊದಲ ಭಾರತ ಭೇಟಿಯಾಗಿದೆ. ನವದೆಹಲಿಗೆ ಆಗಮಿಸಿದ ಡೇವಿಡ್ ಲ್ಯಾಮಿ ಅವರನ್ನು ವಿದೇಶಾಂಗ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್ ಸ್ವಾಗತಿಸಿದರು. ಈ ಭೇಟಿಯು ಭಾರತ ಮತ್ತು ಬ್ರಿಟನ್ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸಲಿದೆ ಎಂದು ಜೈಸ್ವಾಲ್ ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಬ್ರಿಟನ್ ಪ್ರಧಾನಿ ಕೀರ್ ಸ್ಟ್ಯಾಮರ್ ನೇತೃತ್ವದ ಲೇಬರ್ ಪಾರ್ಟಿ, ಬ್ರಿಟನ್‌ನಲ್ಲಿ ಸರ್ಕಾರ ರಚಿಸಿದ ಬಳಿಕ ಮೊದಲ ಬಾರಿಗೆ ಭಾರತಕ್ಕೆ ಬ್ರಿಟನ್ ಉನ್ನತ ಮಟ್ಟದ ನಿಯೋಗ ಆಗಮಿಸಿದೆ. ಇಂದು ಸಂಜೆ ಡೇವಿಡ್ ಲ್ಯಾಮಿ ಅವರು, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ. ಇದೇ ವೇಳೆ

ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರ ವಾಣಿಜ್ಯ ಸಚಿವ ಪಿಯುಷ್ ಗೋಯಲ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರನ್ನು ಡೇವಿಡ್ ಲ್ಯಾಮಿ ಭೇಟಿಯಾಗುವ ನಿರೀಕ್ಷೆಯಿದೆ.

<><*<><>*><>

ಅಮೆರಿಕ ಅಧ್ಯಕ್ಷೀಯ ಚುನಾವಣೆ ಪ್ರಚಾರದಲ್ಲಿ ಭಾಗಿಯಾಗಿದ್ದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೇಲಿನ ಗುಂಡಿನ ದಾಳಿ ಯತ್ನವನ್ನು ತಡೆಯುವ ಕಾರ್ಯಾಚರಣೆಯಲ್ಲಿ ವಿಫಲವಾದ ಕಾರಣ ಅಮೆರಿಕ ರಹಸ್ಯ ಸೇವೆಗಳ ನಿರ್ದೇಶಕರ ಸ್ಥಾನಕ್ಕೆ ಕಿಂಬರ್ಲಿ ಚೀಟಲ್ ನಿನ್ನೆ ರಾಜೀನಾಮೆ ಸಲ್ಲಿಸಿದ್ದಾರೆ. ಭದ್ರತಾ ಲೋಪದ ಸಂಪೂರ್ಣ ಜವಾಬ್ದಾರಿಯನ್ನು ತೆಗೆದುಕೊಳ್ಳುತ್ತೇನೆ. ಜತೆಗೆ ನಿರ್ದೇಶಕ ಸ್ಥಾನದಿಂದ ಕೆಳಗಿಳಿಯುವ ಕಠಿಣ ನಿರ್ಧಾರವನ್ನು ತೆಗೆದುಕೊಂಡಿದ್ದೇನೆ ಎಂದು ಕಿಂಬರ್ಲಿ ಚೀಟಲ್ ತಮ್ಮ ಸಿಬ್ಬಂದಿಗೆ ಕಳುಹಿಸಿರುವ ಇ-ಮೇಲ್‌ನಲ್ಲಿ ತಿಳಿಸಿದ್ದಾರೆ. ಇದೇ ೧೩ರಂದು ಅಮೆರಿಕದ ಪೆನ್ಸಿಲ್ವೇನಿಯಾದ ಬಟ್ಲರ್‌ನಲ್ಲಿ ನಡೆದ ಪ್ರಚಾರ ರ್‍ಯಾಲಿಯಲ್ಲಿ ಡೊನಾಲ್ಡ್ ಟ್ರಂಪ್ ಭಾಷಣ ಮಾಡುತ್ತಿದ್ದ ಸಂದರ್ಭದಲ್ಲಿ ಗುಂಡಿನ ದಾಳಿ ನಡೆದಿತ್ತು. ಟ್ರಂಪ್ ಪಾರಾಗಿದ್ದರು. ಘಟನೆ ಹಿನ್ನೆಲೆಯಲ್ಲಿ ಕಿಂಬರ್ಲಿ ಚೀಟಲ್ ರಾಜೀನಾಮೆಗೆ ಒತ್ತಾಯ ಕೇಳಿಬಂದಿತ್ತು.

<><*<><>*><>

ಇಥಿಯೋಪಿಯಾದಲ್ಲಿ ಭಾರೀ ಮಳೆಯಿಂದಾಗಿ ಉಂಟಾದ ಭೂಕುಸಿತದಿಂದಾಗಿ ಮೃತಪಟ್ಟವರ ಸಂಖ್ಯೆ ೨೨೯ಕ್ಕೆ ಏರಿದೆ. ದಕ್ಷಿಣ ಇಥಿಯೋಪಿಯಾದ ಕೆಂಚೊ ಶಾಚಾ ಗೊಜ್ಜಿ ಜಿಲ್ಲೆಯಲ್ಲಿ ತೀವ್ರ ಮಳೆಯಿಂದಾಗಿ ಭಾನುವಾರ ಮಧ್ಯರಾತ್ರಿ ಮಣ್ಣು ಕುಸಿತ ಉಂಟಾಗಿತ್ತು. ಮಣ್ಣಿನಡಿ ಸಿಲುಕಿರುವವರ ರಕ್ಷಣೆಗಾಗಿ ಸೋಮವಾರ ವಿಪತ್ತು ನಿರ್ವಹಣೆ ಕಾರ್ಯಪಡೆಯ ಸಿಬ್ಬಂದಿ ಧಾವಿಸಿದರು. ಸತತ ಕಾರ್ಯಾಚರಣೆ ನಡೆಸಿ, ಅನೇಕರನ್ನು ರಕ್ಷಿಸಲಾಗಿದ್ದು, ಮಣ್ಣಿನಡಿ ಸಿಲುಕಿದ ಮೃತದೇಹಗಳನ್ನು ಹೊರಕ್ಕೆ ತರಲಾಯಿತು. ಭೂಕುಸಿತದಿಂದ ೧೪೮ ಪುರುಷರು, ೮೧ ಮಹಿಳೆಯರು ಸೇರಿದಂತೆ ಒಟ್ಟು ೨೨೯ ಮಂದಿ ಮೃತಪಟ್ಟಿದ್ದಾರೆ. ಇದರಲ್ಲಿ ವಿಪತ್ತು ನಿರ್ವಹಣೆ ಕಾರ್ಯಪಡೆಯ ಸಿಬ್ಬಂದಿ ಕೂಡ ಸೇರಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><*<><>*><>

ನೇಪಾಳ ರಾಜಧಾನಿ ಕಠ್ಮಂಡುವಿನ ತ್ರಿಭುವನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿಂದು ಖಾಸಗಿ ಏರ್‌ಲೈನ್ಸ್ ಕಂಪನಿಯ ವಿಮಾನ ಪತನಗೊಂಡಿದೆ. ಇಂದು ಬೆಳಗ್ಗೆ ೧೧ ಗಂಟೆ ಸುಮಾರಿಗೆ ವಿಮಾನ ಟೇಕ್ ಆಫ್ ಆಗುವ ವೇಳೆ ಈ ಅವಘಡ ಸಂಭವಿಸಿದೆ. ಶೌರ್ಯ ಏರ್‌ಲೈನ್ಸ್ ಸಂಸ್ಥೆಗೆ ಸೇರಿದ ಈ ವಿಮಾನದಲ್ಲಿ ವಿಮಾನ ಸಿಬ್ಬಂದಿ ಸೇರಿದಂತೆ ಕನಿಷ್ಠ ೧೯ ಮಂದಿ ಪ್ರಯಾಣಿಸುತ್ತಿದ್ದರು. ಸಾವು - ನೋವಿನ ಬಗ್ಗೆ ಸದ್ಯ ವರದಿಯಾಗಿಲ್ಲ.

<><*<><>*><>

ಗುಜರಾತ್ ಮತ್ತು ರಾಷ್ಟ್ರ ರಾಜಧಾನಿ ಪ್ರದೇಶದಲ್ಲಿ ಧಾರಾಕಾರ ಮಳೆ ಮುಂದುವರೆದಿದೆ. ಗುಜರಾತ್‌ನ ದೇವಭೂಮಿ ದ್ವಾರಕ ಜಿಲ್ಲೆಯ ಹಲವು ಪ್ರದೇಶಗಳಲ್ಲಿ ತೀವ್ರ ಮಳೆಯಾಗಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ತಗ್ಗು ಪ್ರದೇಶ, ಕೃಷಿ ಜಮೀನು, ರಸ್ತೆಗಳು ಸೇರಿದಂತೆ ಅನೇಕ ಮನೆಗಳಿಗೆ

ನೀರು ನುಗ್ಗಿದೆ. ದೇವಭೂಮಿ ದ್ವಾರಕ ಜಾಮ್‌ನಗರ್ ಮತ್ತು ಜುನಾಘಡ್ ಜಿಲ್ಲೆಗಳಲ್ಲಿ ಹಲವೆಡೆ ರಸ್ತೆ ಸಂಪರ್ಕ ಬಂದ್ ಆಗಿದೆ. ಕಾಂಬಾಲಿಯದಲ್ಲಿ ಮನೆ ಕುಸಿದು ಮೂವರು ಮೃತಪಟ್ಟಿದ್ದಾರೆ. ಪ್ರವಾಹ ಪೀಡಿತ ದಾಲಿಚಿ ಗ್ರಾಮಕ್ಕೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ಸಿಬ್ಬಂದಿ ಧಾವಿಸಿದ್ದು, ೧೫ ಮಂದಿಯನ್ನು ರಕ್ಷಿಸಲಾಗಿದೆ. ಮುಂದಿನ ಮೂರು ದಿನಗಳ ಕಾಲ ಗುಜರಾತ್‌ನಾದ್ಯಂತ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದೇವಭೂಮಿ ದ್ವಾರಕ, ಜಾಮ್‌ನಗರ್, ಜುನಾಗಢ, ಸೂರತ್, ವಲ್ಸಾದ್, ನವ್‌ಸಾರಿ ಮತ್ತು ಧಾಂಗ್ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಇದೇ ವೇಳೆ ಮುಂದಿನ ಎರಡು ದಿನಗಳಲ್ಲಿ ಕೊಂಕಣ, ಗೋವಾ ಮತ್ತು ಮಹಾರಾಷ್ಟ್ರದ ಹಲವೆಡೆ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ಏಷ್ಯಾ ಕಪ್ ಟಿ-೨೦ ಮಹಿಳಾ ಕ್ರಿಕೆಟ್ ಪಂದ್ಯಾವಳಿಯಲ್ಲಿ ಶ್ರೀಲಂಕಾದ ದಂಬೂಲ್ಲಾ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯಲಿರುವ ’ಬಿ’ ಗುಂಪಿನ ಪಂದ್ಯದಲ್ಲಿ ಬಾಂಗ್ಲಾದೇಶ ಮತ್ತು ಮಲೇಷಿಯಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨ ಗಂಟೆಗೆ ಆರಂಭವಾಗಲಿದೆ. ರಾತ್ರಿ ೭ ಗಂಟೆಗೆ ಆರಂಭವಾಗಲಿರುವ ’ಬಿ’ ಗುಂಪಿನ ಮತ್ತೊಂದು ಪಂದ್ಯದಲ್ಲಿ ಶ್ರೀಲಂಕಾ ಹಾಗೂ ಥೈಲ್ಯಾಂಡ್ ತಂಡಗಳು ಸೆಣಸಲಿವೆ. ಕಳೆದ ರಾತ್ರಿ ನಡೆದ ’ಎ’ ಗುಂಪಿನ ಪಂದ್ಯದಲ್ಲಿ ನೇಪಾಳ ವಿರುದ್ಧ ಭಾರತ ೮೨ ರನ್‌ಗಳ ಭರ್ಜರಿ ಜಯ ಸಾಧಿಸಿದ್ದು, ಈ ಮೂಲಕ ಭಾರತ ಸೆಮಿಫೈನಲ್ಸ್ ಪ್ರವೇಶಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೧೭೮ ರನ್ ಗಳಿಸಿತು. ೧೭೯ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ನೇಪಾಳ ತಂಡ, ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೯೬ ರನ್ ಗಳಿಸಲಷ್ಟೇ ಶಕ್ತವಾಯಿತು. ೪೮ ಬಾಲ್‌ಗಳಲ್ಲಿ ೮೧ ರನ್ ಸಿಡಿಸಿದ ಭಾರತದ ಶಫಾಲಿ ವರ್ಮಾ, ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೨.೩೦ ಕ್ಕೆ <>*><>